

ಪಕ್ಕದ ಬೀದಿಯಲ್ಲಿ ಅಟ್ಟದ ಮೇಲಿರುವ ಅವನ ಆಫೀಸಿಗೆ ನುಗ್ಗಿ, ಕೇಸಿನ ಫೈಲುಗಳನ್ನು ಸುತ್ತಲೂ ರಾಶಿ ಹಾಕಿಕೊಂಡು ಕೂತಿರುವ ಅವನನ್ನು ಹಿಡಿದು ತನ್ನ ಸಿಟ್ಟಿಳಿಯುವ ತನಕ ಬಡಿಯಲೇಬೇಕೆಂದು ರೋಷದಿಂದ ಹೆಜ್ಜೆಗಳನ್ನು ಎತ್ತೆತ್ತಿ ಇಡತೊಡಗಿದಳು. ತನ್ನನ್ನು ಕಂಡ ಕೂಡಲೇ, 'ಅಕ್ಕಾ ಆರಾಮಾ' ಎಂದು ಹಲ್ಲು ಕಿರಿಯುತ್ತ, 'ಯಾಕಕ್ಕ ಇಷ್ಟು ಮೈ ಬಂದದಲ್ಲ, ವಾಕಿಂಗೂ ಮಾಡೂದಿಲ್ವಾ ಹೆಂಗೆ, ಡಾಕ್ಟ್ರಿಗಾದ್ರೂ ತೋರಸ್ಕಳಿ' ಎಂದೆಲ್ಲ ಬೊಗಳೆ ಬಿಡುತ್ತ, ತನ್ನ ಬಳ್ಳಿ ಮೈಯನ್ನು ವಾಲಾಡಿಸುವ ವಲ್ಲರಿಯನ್ನು ಇವತ್ತು ಬಿಡಬಾರದು. ಕಥೆ ಹೇಳಲು ಭೂಮಿಗಿಳಿದ ನೀಲಿ ಮೋಡದಂತೆ ಗಾಳಿಗೆ ಹಾರಾಡುವ ಅವಳ ಅಲೆಗೂದಲನ್ನು ಮುಷ್ಟಿಯಲ್ಲಿ ಹಿಡಿದು ದರದರ ಎಳೆಯಬೇಕು. ಎಷ್ಟು ಸೊಕ್ಕು ಆ ಚೋದಿಗೆ, ತಾನು ತೆಳ್ಳಗೆ ಬೆಳ್ಳಗೆ ಸುಂದರಿಯಾಗಿದ್ದೇನೆ ಅಂತಲೇ ಇಷ್ಟು ಉರಿಯುವುದಲ್ವ ಅವಳು, ಪಟಪಟ ಇಂಗ್ಲೀಷು ಮಾತಾಡ್ತೇನೆ ಅಂತ, ರೊಯ್ಯನೆ ಗಾಡಿ ಬಿಟ್ಟುಕೊಂಡು ಬೇಕೆಂದಲ್ಲಿ ಹೋಗಬಲ್ಲೆ ಅಂತ ಪೊಗರು ತುಂಬಿಕೊಂಡಿದೆ. ಆದ್ದರಿಂದಲೇ ನನ್ನ ಗಂಡ ರಾತ್ರಿ ಒಂಬತ್ತು ಹೊಡೆದರೂ ಕೇಸು, ಕೇಸು